# ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ ಕೆ. ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು)
ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: : 2035
ಉತ್ತರ ದಿನಾಂಕ : 27.03.2020

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಕೇಂದ್ರ ಸರ್ಕಾರದ ಜಲಜೀವನ್ ಅಭಿಯಾನ ಅಡಿಯಲ್ಲಿ ಆಯ್ಕೆ ಮಾಡಿರುವ ಪ್ರದೇಶಗಳು ಯಾವುವು; (ಪೂರ್ಣ ವಿವರ ನೀಡುವುದು) | ಜಲಜೀವನ್ ಮಿಷನ್ ಅಭಿಯಾನದಡಿಯಲ್ಲಿ ಇಂತಹದೇ ಪ್ರದೇಶವೆಂದು ಆಯ್ಕೆಯಾಗಿರುವುದಿಲ್ಲ. ಆದರೆ ರಾಜ್ಯದಲ್ಲಿ ಈ ಹಿಂದೆ NRDWP ಯೋಜನೆಯಡಿಯಲ್ಲಿ ನಿರ್ಮಾಣ ಮಾಡಿ ಸುಸ್ಥಿರವಾಗಿ ನಡೆಯುತ್ತಿರುವ ಬಹುಗ್ರಾಮ ಯೋಜನೆಗಳ ವ್ಯಾಪ್ತಿಯ ಮನೆಗಳನ್ನು ಪ್ರಥಮ ಹಂತದಲ್ಲಿ ಪರಿಗಣಿಸಲಾಗುತ್ತಿದೆ. |
| ಆ. | ರಾಜ್ಯ ಸರ್ಕಾರ ಈ ಜಲಜೀವನ್ ಅಭಿಯಾನ ಅಡಿ ಇದುವರೆಗೂ ಕೇಂದ್ರ ಸರ್ಕಾರದಿಂದ ಪಡೆದಿರುವ ಅನುದಾನವೆಷ್ಟು; (ಪೂರ್ಣ ವಿವರ ನೀಡುವುದು) | ಜಲಜೀವನ್ ಮಿಷನ್ ಅಭಿಯಾನ ಪ್ರಸಕ್ತ ಸಾಲಿನ ಮಧ್ಯಕಾಲದಿಂದ ಪ್ರಾರಂಭವಾಗಿದೆ. ಇದರಡಿ ಈವರೆಗೆ ರೂ.323.71ಕೋಟಿ ಅನುದಾನ ಬಿಡುಗಡೆಯಾಗಿದೆ. |
| ಇ. | ಈ ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರವಾಗಲೀ ಅಥವಾ ರಾಜ್ಯ ಸರ್ಕಾರವಾಗಲೀ ನಿಗಧಿಪಡಿಸಿರುವ ಭೌತಿಕ ಮತ್ತು ಆರ್ಥಿಕ ಗುರಿಗಳೇನು ಮತ್ತು ಇವುಗಳನ್ನು ಎಷ್ಟರ ಮಟ್ಟಿಗೆ ಸಾಧಿಸಲಾಗಿದೆ? (ಪೂರ್ಣ ಮಹಿತಿ ನೀಡುವುದು) | ಕೇಂದ್ರ ಸರ್ಕಾರ ರೂಪಿಸಿರುವ ಜಲಜೀವನ್ ಮಿಷನ್ ಪ್ರಕಾರ ರಾಜ್ಯದ ಎಲ್ಲಾ ಗ್ರಾಮೀಣ ಮನೆಗಳಿಗೆ ಕಾರ್ಯಾತ್ಮಕ ನಳ ನೀರು ಸಂಪರ್ಕ ಒದಗಿಸಿ ನಿಗದಿತ ಪ್ರಮಾಣದ ಮತ್ತು ಗುಣಮಟ್ಟದ ನೀರನ್ನು 2024ರೊಳಗೆ ಹಂತ ಹಂತವಾಗಿ ಒದಗಿಸುವುದಾಗಿದೆ. ಈ ನಿಟ್ಟಿನಲ್ಲಿ ರಾಜ್ಯದಲ್ಲಿ ವಿವಿಧ ಯೋಜನೆಯಡಿ ಈವರೆಗೆ 46965 ಕಾರ್ಯಾತ್ಮಕ ನಳನೀರು ಸಂಪರ್ಕ ಒದಗಿಸಲಾಗಿರುತ್ತದೆ.<br><br>ಜಲಜೀವನ್ ಮಿಷನ್ ಅಭಿಯಾನದಡಿ ಈವರೆಗೆ ರೂ.323.71ಕೋಟಿ ಅನುದಾನ ಬಿಡುಗಡೆಯಾಗಿದ್ದು, ಒಟ್ಟಾರೆ ರೂ.109.82ಕೋಟಿ ವೆಚ್ಚವಾಗಿರುತ್ತದೆ |

ಸಂ.ಗ್ರಾಕುನೀ&ನೈಇ/133/ಗ್ರಾನೀಸ(5)/2020

(ಕೆ. ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು